ಮಾಡಲಾಗುತ್ತದೆ. ಆಯಾ ಸ್ಥಳದಲ್ಲಿನ ವಿದ್ಯುತ್ ಮಾರ್ಗಗಳ ಲಭ್ಯತೆ ಮೇರೆಗೆ ಸಂಪರ್ಕ ಕಲ್ಪಿಸುವ ಅವಧಿ ಹೆಚ್ಚು ಕಡಿಮೆಯಾಗುತ್ತದೆ.

ಈ ವಿಳಂಬ ತಪ್ಪಿಸಲು ಸರ್ಕಾರವು ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 2009–10ನೇ ಸಾಲಿನಲ್ಲಿ ಗೌರಿಬಿದನೂರು ತಾಲ್ಲೂಕಿಗೆ ರೂ. 17.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. 2010–11ನೇ ಸಾಲಿನಲ್ಲಿ ರೂ. 28.50 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳನ್ನು ಸಂಪರ್ಕಿಸಿ ತ್ವರಿತವಾಗಿ ವಿದ್ಯುತ್ ಸೌಲಭ್ಯ ಕಲ್ಪಿಸುವ ಬಗ್ಗೆ ಜರೂರು ಕ್ರಮ ಜರುಗಿಸಲಾಗುತ್ತಿದೆ.

ಸರ್ಕಾರದ ಅನುದಾನ

575 (991) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):– ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) 2009–10ನೇ ಸಾಲಿನಲ್ಲಿ ಗೌರಿಬಿದನೂರು ತಾಲ್ಲೂಕಿನಲ್ಲಿ ಅಲ್ಪಸಂಖ್ಯಾತರ ಎಷ್ಟು ಮನೆಗಳ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ. (ಗ್ರಾಮವಾರು ವಿವರ ನೀಡುವುದು);

ಆ) ಗೌರಿಬಿದನೂರು ಪಟ್ಟಣದಲ್ಲಿ ಸುಮಾರು 1 ಕೋಟಿ ವೆಚ್ಚದಲ್ಲಿ ಶಾದಿಮಹಲ್ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಶಾದಿಮಹಲ್ ನಿರ್ಮಾಣಕ್ಕೆ ಸರ್ಕಾರದ ವತಿಯಿಂದ ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಡಾ॥ ಮುಮ್ತಾಜ್ ಆಲಿಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)–

ಅ) ಅಲ್ಪಸಂಖ್ಯಾತರ ಇಲಾಖಾ ವತಿಯಿಂದ ಗೌರಿಬಿದನೂರು ತಾಲ್ಲೂಕಿನಲ್ಲಿ ಅಲ್ಪಸಂಖ್ಯಾತರ ಮನೆಗಳ ಅಭಿವೃದ್ಧಿಗಾಗಿ ಅನುದಾನವನ್ನು ನೀಡುತ್ತಿರುವುದಿಲ್ಲ.

ಇಂತಹ ಯೋಜನೆ ಸರ್ಕಾರದ ಮುಂದಿಲ್ಲ ಆದುದರಿಂದ ಎಲ್ಲೂ ಕೊಡಲಾಗದು.

ಆ) ಸರ್ಕಾರದ ಗಮನಕ್ಕೆ ಬಂದಿಲ್ಲ

ಇ) ಉದ್ಭವಿಸುವುದಿಲ್ಲ, ಆದರೆ ಸರ್ಕಾರ ರೂ. 20.00 ಲಕ್ಷ ಮಂಜೂರು ಮಾಡಿದೆ.

ಬಸ್ ನಿಲ್ದಾಣ ನಿರ್ಮಿಸುವುದು

576 (992) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):– ಮಾನ್ಯ ಸಾರಿಗೆ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಘಟಕದ ಅಭಿವೃದ್ಧಿ ಹಾಗೂ ಬಸ್ ನಿಲ್ದಾಣದ ಅಭಿವೃದ್ಧಿಗಾಗಿ ನಂಜುಂಡಪ್ಪ ವರದಿ ಪ್ರಕಾರ 2009–10ನೇ ಸಾಲಿನಲ್ಲಿ ಸುಮಾರು ರೂ. 2.00 ಕೋಟಿಗಳ ಅನುದಾನ ಮಂಜೂರಾಗಿದ್ದರೂ ಸಹ ಇದುವರೆವಿಗೂ ಕಾಮಗಾರಿ ಪ್ರಾರಂಭವಾಗದಿರಲು ಕಾರಣವೇನು;